## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿನ ಶಕಾಪೂರ ಗ್ರಾಮದ 50 ಸಂಖ್ಯಾಬಲದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯವನ್ನು ಕಲಬುರುಗಿ ಜಿಲ್ಲೆ, ಆಳಂದ ತಾಲ್ಲೂಕಿನ ಸರಸಂಬಾ ಗ್ರಾಮಕ್ಕೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:** ಆಯುಕ್ತರು,ಹಿಂವಕ ಇವರ ಏಕಕಡತ ಸಂಖ್ಯೆ:BCWD-12043 /25/2022-BCWD-HOSTEL-BCWD

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿನ ಸರಸಂಬಾ ಗ್ರಾಮದಲ್ಲಿರುವ 08 ಪ್ರಾಥಮಿಕ ಶಾಲೆಗಳು ಹಾಗೂ 02 ಪ್ರೌಢ ಶಾಲೆಗಳಿಗೆ 5.ಕಿ.ಮಿ ದೂರದಿಂದ 618 ವಿದ್ಯಾರ್ಥಿಗಳು ವ್ಯಾಸಂಗಕ್ಕಾಗಿ ಬರುತ್ತಿದ್ದು ಹಾಗೂ ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿನ ಶಕಾಪೂರ ಗ್ರಾಮದಲ್ಲಿರುವ 50 ಸಂಖ್ಯಾಬಲದ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯಕ್ಕೆ ಸತತವಾಗಿ ಮೂರು ವರ್ಷಗಳಿಂದ ಮಂಜೂರಾತಿ ಸಂಖ್ಯೆಗಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿದ್ದು, ಸದರಿ ವಿದ್ಯಾರ್ಥಿನಿಲಯವನ್ನು ಕಲಬುರುಗಿ ಜಿಲ್ಲೆ, ಆಳಂದ ತಾಲ್ಲೂಕಿನ ಸರಸಂಬಾ ಗ್ರಾಮಕ್ಕೆ ಹುದ್ದೆಗಳ ಸಮೇತ ಸರಸಂಬಾ ಗ್ರಾಮದ ಸರ್ಕಾರಿ ಶಾಲೆಯ ಉಚಿತ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 442 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:- 27.09.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿನ ಶಕಾಪೂರ ಗ್ರಾಮದ 50 ಸಂಖ್ಯಾಬಲದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯವನ್ನು (BCWD-1347) ಈ ಕೆಳಕಂಡಂತೆ ಹುದ್ದೆಗಳ ಸಮೇತ ಅದೇ ತಾಲ್ಲೂಕಿನ ಸರಸಂಬಾ ಗ್ರಾಮದ ಸರ್ಕಾರಿ ಶಾಲೆಯ ಉಚಿತ ಕಟ್ಟಡಕ್ಕೆ ಸ್ಥಳಾಂತರಿಸಿ ಆದೇಶಿಸಿದೆ.

| HIC No. | ಹಾಲಿ ಇರುವ ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಸ್ಥಳಾಂತರಿಸಬೇಕಾಗಿರುವ ವಿದ್ಯಾರ್ಥಿನಿಲಯದ ವಿವರ | ಮಂಜೂರಾತಿ ಸಂಖ್ಯಾಬಲ |
|---|---|---|---|
| BCWD-1347 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಶಕಾಪೂರ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಸರಸಂಬಾ ಗ್ರಾಮ, ಆಳಂದ ತಾಲ್ಲೂಕು, ಕಲಬುರಗಿ ಜಿಲ್ಲೆ. | 50 |

27/9/22

2....

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆ ಹಾಗೂ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparween 27/09/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು , (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಕಲಬುರುಗಿ ಜಿಲ್ಲೆ, ಕಲಬುರುಗಿ.
4. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕಲಬುರುಗಿ ಜಿಲ್ಲೆ.

**ಪ್ರತಿ ಮಾಹಿತಿಗಾಗಿ:**

1. ಅಧ್ಯಕ್ಷರು, ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿ, ಕರ್ನಾಟಕ ವಿಧಾನ ಸಭೆ , ವಿಧಾನಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**********